ಸುರಪುರ ಕ್ಷೇತ್ರದ ಬೆಂಚಿಗಡ್ಡಿ ಗ್ರಾಮದ ಹತ್ತಿರ ಕೃಷ್ಣ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ.

2904:(3914)

ಶ್ರೀ ರಾಜ ವೆಂಕಟಪ್ಪ ನಾಯಕ (ಸುರಪುರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಚಿಗಡ್ಡಿ ಗ್ರಾಮದ ಹತ್ತಿರ ಕೃಷ್ಣಾ ನದಿಗೆ ಅಡ್ಡಲಾಗಿ ಸೇತುವೆಯನ್ನು ಕಟ್ಟುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು?

ಶ್ರೀ.ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

ಅ) ಇದೆ.

ಆ) ನಬಾರ್ಡ್ ಯೋಜನೆಯಡಿ ಈ ಕಾಮಗಾರಿಯನ್ನು ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಪತ್ರಿಕಾ ಅಕಾಡೆಮಿಗೆ ಹೆಚ್ಚಿನ ಅನುದಾನ.

2905:(3904)

ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) ಮಾನ್ಯ ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಪತ್ರಿಕಾ ಅಕಡೆಮಿಗೆ 1998-99ರಲ್ಲಿ ಸರ್ಕಾರದಿಂದ ನೀಡಿದ ಅನುದಾನವೆಷ್ಟು?

ಆ) ಈ ಅನುದಾನವನ್ನು ಹೆಚ್ಚು ಮಾಡುವ ಬಗ್ಗೆ ಸರ್ಕಾರಕ್ಕೆ ಮೇಲ್ಕಂಡ ಅಕಾಡೆಮಿಯಿಂದ ಪ್ರಸ್ತಾವನೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಸಿ.ನಾಣಯ್ಯ (ಕಾನೂನು, ವಾರ್ತಾ ಮತ್ತು ಪ್ರಚಾರ ಸಚಿವರು):

ಅ) 1998-99ನೇ ಸಾಲಿನ ಆಯವ್ಯಯದಲ್ಲಿ ರೂ. 5.00 ಲಕ್ಷಗಳನ್ನು ನೀಡಿದೆ.

ಆ) ಹೌದು

ಇ) 10.00 ಲಕ್ಷ ರೂ.ಗಳ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಬೆಂಗಳೂರು ರೇಸ್ ಕೋರ್ಸ್‌ನ್ನು ಸ್ಥಳಾಂತರಿಸುವುದು.

2906:(3951)

ಶ್ರೀ ರಾಮಲಿಂಗ ರೆಡ್ಡಿ (ಜಯನಗರ) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ರೇಸ್ ಕೋರ್ಸ್ ನಗರದ ಮಧ್ಯ ಭಾಗದಲ್ಲಿದ್ದು ರೇಸ್ ನಡೆಯುವ ವೇಳೆಯಲ್ಲಿ ವಾಹನ ಸಂಚಾರಕ್ಕೆ ತೊಂದರೆಯುಂಟಾಗುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ರೇಸ್‌ಕೋರ್ಸ್ ಅನ್ನು ನಗರದ ಹೊರ ಭಾಗಕ್ಕೆ ಸ್ಥಳಾಂತರಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು)

ಅ) ಹೌದು. ಆದರೆ, ಈ ತೊಂದರೆಯನ್ನು ನಿವಾರಿಸಲು ಕ್ಲಬ್‌ನ ವತಿಯಿಂದ ಈಗ ಒಂದು ಸಬ್ ವೇ ಯನ್ನು ನಿರ್ಮಿಸಲಾಗಿದೆ.

ಆ) ರೇಸ್ ಕೋರ್ಸ್ ಅನ್ನು ನಗರದ ಹೊರಭಾಗಕ್ಕೆ ಸ್ಥಳಾಂತರಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದ್ದು ಸಚಿವ ಸಂಪುಟವು ತೆಗೆದುಕೊಂಡ ತೀರ್ಮಾನದಂತೆ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಿದ್ದು ಆ ಸಮಿತಿಯು ಈ ವಿಷಯವನ್ನು ಪರಿಶೀಲಿಸುತ್ತಿದೆ.

ಗುಳ್ಳೇದಗುಡ್ಡ ಕ್ಷೇತ್ರದ ಪರಿಶಿಷ್ಟ ಜನಾಂಗದವರಿಗೆ ಮಂಜೂರು ಮಾಡಿರುವ ಟಿ.ವಿ.ಗಳ ಕುರಿತು.

2907:(3901)

ಶ್ರೀ ರಾಜಶೇಖರ.ವಿ.ಶೀಲವಂತ (ಗುಳ್ಳೇದಗುಡ್ಡ): ಮಾನ್ಯ ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?